ಬೈಲಹೊಂಗಲ ತಾಲ್ಲೂಕಿನ ನಯಾನಗರ ಬೈಲವಾಡ ಹಾಗೂ ದೊಡ್ಡವಾಡ ಗ್ರಾಮಗಳಲ್ಲಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಗಳು.

2413(3117)

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ(ಬೈಲಹೊಂಗಲ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ನಯಾನಗರ ಬೈಲವಾಡ ಹಾಗೂ ದೊಡ್ಡವಾಡ ಗ್ರಾಮಗಳಲ್ಲಿ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಗಳಿಗೆ ಕಟ್ಟಡ ಇಲ್ಲದಿರುವ ಸಂಗತಿ ನಿಜವೇ;

ಆ) ಹಾಗಿದ್ದಲ್ಲಿ ಈ ಕಟ್ಟಡಗಳನ್ನು ಕಟ್ಟಲು ಯಾವ ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ;

ಇ) ಎಷ್ಟು ದಿನಗಳಲ್ಲಿ ಈ ಕಟ್ಟಡಗಳನ್ನು ಕಟ್ಟಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ(ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ ಮತ್ತು ಇ) ಈ ಮೂರು ವಿದ್ಯಾರ್ಥಿನಿಲಯಗಳ ಪೈಕಿ ನಯಾನಗರ ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಕ್ಕೆ ನಿವೇಶನವನ್ನು ಪಡೆದುಕೊಳ್ಳಲಾಗಿದ್ದು, ಉಳಿದ ಎರಡು ವಿದ್ಯಾರ್ಥಿನಿಲಯಗಳಿಗೂ ನಿವೇಶನಗಳನ್ನು ಪಡೆದುಕೊಳ್ಳಲು ಕ್ರಮ ವಹಿಸಲಾಗಿರುತ್ತದೆ. ನಿವೇಶನ ಇರುವ ಕಡೆಯಲ್ಲಿ ಹಣದ ಲಭ್ಯತೆಯನ್ನು ಆಧರಿಸಿ ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣದ ಬಗ್ಗೆ ಪರಿಶೀಲಿಸಲಾಗುವುದು.

ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ತೆಗೆದುಕೊಂಡ ಕೆಲಸಗಳು.

2414(3119)

ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ(ಬೈಲಹೊಂಗಲ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1998-99 ಹಾಗೂ 1999-2000ನೇ ಸಾಲಿನಲ್ಲಿ ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಯಾವ ಯಾವ ಕೆಲಸಗಳನ್ನು ತೆಗೆದುಕೊಳ್ಳಲಾಗಿದೆ ಹಾಗೂ